ದಿನಾಂಕ: 06.04.2022 ರಂದು ಬೆಳಗ್ಗೆ 11.00 ಗಂಟೆಗೆ ಕಾಮಾಕ್ಷಿಪಾಳ್ಯ ವಾರ್ಡ್ ನಂ. 101 ರಲ್ಲಿ ಶ್ರೀ ಸತ್ಯನಾರಾಯಣ ರಾಜ್, ನೋಡಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಗಳ ವಿವರ:-

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು ಹಾಗೂ ವಾರ್ಡ್ ಕಮಿಟಿ ಸದಸ್ಯರು:-**

1. ಶ್ರೀ ಸತ್ಯನಾರಾಯಣ ರಾಜ್, ನೋಡಲ್ ಅಧಿಕಾರಿಗಳು ಹಾಗೂ ಸದಸ್ಯರು
2. ಶ್ರೀ ಪೂಜಾರಪ್ಪ, ಸಹಾಯಕ ಅಭಿಯಂತರರು, ವಾರ್ಡ್ ನಂ. 101 ಕಾಮಾಕ್ಷಿಪಾಳ್ಯ
3. ಶ್ರೀಮತಿ ರಾಜೇಶ್ವರಿ, ಹಿರಿಯ ಆರೋಗ್ಯ ಪರಿವೀಕ್ಷಕರು
4. ಶ್ರೀ ವಿನಾಯಕ, ಮಾರ್ಷಲ್
5. ಶ್ರೀಮತಿ ರೂಪಶ್ರೀ, ಕಿರಿಯ ಆರೋಗ್ಯ ಪರಿವೀಕ್ಷಕರು
6. ಶ್ರೀ ಕೆ. ಉಮಾಶಂಕರ್, ಶಾರದಾ ಕಾಲೊನಿ ಸದಸ್ಯರು
7. ಶ್ರೀ ಎಂ. ರವೀಂದ್ರ, ಸದಸ್ಯರು
8. ಶ್ರೀ ಶ್ರೀನಿವಾಸ, ಸೂಪರ್ ವೈಸರ್
9. ಶ್ರೀ ವೆಂಕಟೇಶ್, ಕಂದಾಯ ಪರಿವೀಕ್ಷಕರು
10. ಶ್ರೀ ರವಿನಾಥ್, ಸದಸ್ಯರು,

ದಿನಾಂಕ: 16.03.2022 ರಂದು ನಡೆದ ಸಭೆಯಲ್ಲಿ ಹಲವಾರು ವಿಷಯಗಳನ್ನು ಚರ್ಚಿಸಿ, ಅದಕ್ಕೆ ಸಂಬಂಧಪಟ್ಟ ವಿಷಯಗಳಿಗೆ ಪರಿಹಾರ ತೆಗೆದುಕೊಳ್ಳಲಾಗಿರುತ್ತದೆ. ಹಾಗು ದಿನಾಂಕ: 06.04.2022ರ ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ. 101 ಕಾಮಾಕ್ಷಿಪಾಳ್ಯ **ಎಸ್.ಬಿ.ಐ. ಆಫೀಸರ್ಸ್ ಸಮುಧಾಯ ಭವನ, ಎಸ್.ಬಿ.ಐ. ಕಾಲೋನಿ, ಬಸವೇಶ್ವರನಗರ, ಕಾಮಾಕ್ಷಿಪಾಳ್ಯ,** ಇಲ್ಲಿ ಪಾಲಿಕೆ ಅಧಿಕಾರಿಗಳೊಂದಿಗೆ ಸಭೆಯನ್ನು ಕೈಗೊಂಡು ಈ ಕೆಳಗಿನ ವಿಷಯಗಳನ್ನು ಚರ್ಚಿಸಲಾಯಿತು.

1. ನಗರ ಜಿಲ್ಲಾಧಿಕಾರಿ ಕಛೇರಿಯಿಂದ ಎಫಿಕ್ ಕಾರ್ಡ್ ಸಲುವಾಗಿ ಎಲ್ಲಾ ಸದಸ್ಯರುಗಳು ಸಭೆಯಲ್ಲಿ ತಿಳಿಸಿದಾಗಿ, ಸಭೆಯಲ್ಲಿ ಹಾಜರಿದ್ದ ಕಂದಾಯ ನಿರೀಕ್ಷಕರು ಎಫಿಕ್ಸ್ ಕಾರ್ಡ್ ಬಗ್ಗೆ ಕೆಲವು ಸಲಹೆ ಸೂಚನೆಗಳನ್ನು ನೀಡಲಾಯಿತು. ಅದರಂತೆ ಸರ್ವ ಸದಸ್ಯರು ಮುಂದಿನ ದಿನಗಳಲ್ಲಿ ನಗರ ಜಿಲ್ಲಾಧಿಕಾರಿಗಳ ಕಛೇರಿಯಿಂದ ಸರ್ವೆ ಕಾರ್ಯಕ್ಕೆ ಬಂದಾಗ ಸಹಕರಿಸುವುದು ಇದಕ್ಕೆ ಪೂರ್ಣ ಪ್ರಮಾಣವಾಗಿ ತಿಳಿಸುವ ಸಲುವಾಗಿ ವಾರ್ಡ್ ನಂ. 101ರ ಕಂದಾಯ ಅಧಿಕಾರಿಗಳ ಭೇಟಿ ಮಾಡಲು ಸಭೆಯಲ್ಲಿ ಚರ್ಚಿಸುವ ಸಮಯದಲ್ಲಿ ಶ್ರೀ ಶ್ರೀನಿವಾಸಮೂರ್ತಿ ರವರು ಕಂದಾಯ ಪಡೆಯುವಲ್ಲಿ 2-3 ತಿಂಗಳ ಹಿಂದೆ ಹೆಚ್ಚಾಗಿ ಕಂದಾಯ ಪಡೆಯಲಾಗಿದ್ದು, ನಿಖರವಾದ ಬೆಲೆ ನಿಗಧಿಪಡಿಸಿ, ಉಳಿದಂತಹ ಮೊತ್ತವನ್ನು ತಂತ್ರಾಂಶದ ಮೂಲಕ ಹಿಂದಕ್ಕೆ ಪಡೆಯಲು ಸಾಧ್ಯವಾಗುತ್ತಿಲ್ಲ. ಅದನ್ನು ತುರ್ತಾಗಿ ಸರಿಪಡಿಸಿಕೊಡಬೇಕೆಂದು ಸಭೆಯಲ್ಲಿ ತಿಳಿಸಿರುತ್ತಾರೆ.

2. ಹಿರಿಯ ಆರೋಗ್ಯಾಧಿಕಾರಿಗಳು ಕೋವಿಡ್-19ರ ಬಗ್ಗೆ ಸಭೆಗೆ ಶ್ರೀಮತಿ ರಾಜೇಶ್ವರಿ, ಹಿ.ಆ.ಪ. ರವರು ಸದರಿ ಸಾಂಕ್ರಾಮಿಕ ರೋಗದ ಬಗ್ಗೆ ನಮ್ಮಲ್ಲಿ ಯಾವುದೇ ತರಹದ ಲಸಿಕೆಯಾಗಲಿ ಅಥವಾ ಪರಿಕ್ಷಿಸುವುದಾಗಲಿ ಯಾವುದಕ್ಕೂ ತೊಂದರೆ ಇಲ್ಲ ಒಂದು ವೇಳೆ ಏನಾದರೂ ಸಾಂಕ್ರಾಮಿಕ ರೋಗ ಕಂಡು ಬಂದಲ್ಲಿ ನಮ್ಮ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಮಾಹಿತಿ ನೀಡುವಂತೆ ಸಭೆಯಲ್ಲಿ ತಿಳಿಸಿರುತ್ತಾರೆ.

Scanned by CamScanner

3. ಶ್ರೀ ವಿಕಾಸ್ ರವರ ಮನೆಗೆ ಬಿ.ಡಬ್ಲ್ಯೂ.ಎಸ್.ಎಸ್.ಬಿ. ರವರಿಂದ ರಸ್ತೆ ಕತ್ತರಿಸುವ ಸಮಯದಲ್ಲಿ ವಿದ್ಯುತ್ ಕೇಬಲ್ ಡ್ಯಾಮೇಜ್ ಆಗಿದ್ದು, ವಿದ್ಯುತ್ ಸಂಪರ್ಕ ಪಡೆಯಲು ಸಮಸ್ಯೆಯಾಗಿರುತ್ತದೆ. ಅದಕ್ಕೆ ತುರ್ತಾಗಿ ಸಂಬಂಧಪಟ್ಟ ಅಧಿಕಾರಿಗಳಿಂದ ಸರಿಪಡಿಸಿಕೊಡುವಂತೆ ಸಭೆಯಲ್ಲಿ ತಿಳಿಸಲಾಯಿತು.
4. ಇನ್ನುಳಿದಂತೆ ಯಾವುದೇ ತರಹದ ಘಟನೆಗಳು ವಾರ್ಡ್ ವ್ಯಾಪ್ತಿಯಲ್ಲಿ ಉಬ್ಬವಿಸಿರುವುದಿಲ್ಲ. ಎಂಬ ಅಂಶವನ್ನು ತಮ್ಮ ಗಮನಕ್ಕೆ ತರಲಾಗಿದೆ.

ಸದಸ್ಯ ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ಮಾನ್ಯ ಅಧ್ಯಕ್ಷರಿಗೆ ವಾರ್ಡ್ ಸಮಿತಿ ಸದಸ್ಯರುಗಳಿಗೆ ಮತ್ತು ವಿವಿಧ ಇಲಾಖೆಯ ಅಧಿಕಾರಿಗಳಿಗೆ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

4/4/2022

ಸದಸ್ಯ ಕಾರ್ಯದರ್ಶಿ
ವಾರ್ಡ್ ಸಮಿತಿ

ನೋಡಲ್ ಅಧಿಕಾರಿಗಳು
ವಾರ್ಡ್ ನಂ. 101

Scanned by CamScanner